## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಗ್ರಾಮ ಪಂಚಾಯತಿಗಳಲ್ಲಿ ಉಪಗ್ರಹ ಸ್ವೀಕೃತಿ ಕೇಂದ್ರಗಳನ್ನು ಸ್ಥಾಪಿಸುವ ಕುರಿತು.

ಓದಲಾಗಿದೆ:

1. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು ರವರ ಪತ್ರ ಸಂಖ್ಯೆ:ರಾಗ್ರಾಸಂ/ಜಿ.ಪಿ.ಆರ್.ಒ.ಟಿ/01-2018-19, ದಿನಾಂಕ: 04-04-2018.
2. ಆರ್ಥಿಕ ಇಲಾಖೆಯ ಅನಧಿಕೃತ ಟಿಪ್ಪಣಿ ಸಂಖ್ಯೆ:ಆಇ 216 ವೆಚ್ಚ-6/2018, ದಿನಾಂಕ: 02-04-2018.
3. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಅಧ್ಯಕ್ಷತೆಯಲ್ಲಿ ದಿನಾಂಕ:01-08-2018ರ ಸಭೆಯ ನಡವಳಿ.

*****

**ಪ್ರಸ್ತಾವನೆ:**

ರಾಜ್ಯದ ಎಲ್ಲಾ 6024 ಗ್ರಾಮ ಪಂಚಾಯತಿಗಳಿಗೆ ಆಯ್ಕೆಯಾಗಿರುವ ಅಧ್ಯಕ್ಷರು, ಉಪಾಧ್ಯಕ್ಷರು ಹಾಗೂ ಸದಸ್ಯರುಗಳಿಗೆ ಪಂಚಾಯತ್ ರಾಜ್ ವ್ಯವಸ್ಥೆಯ ನಿಯಮಗಳು ಹಾಗೂ ಅಭಿವೃದ್ಧಿ ಕಾರ್ಯಕ್ರಮಗಳ ಬಗ್ಗೆ ಸಾಮರ್ಥ್ಯಾಭಿವೃದ್ಧಿಗೊಳಿಸಲು ಮೈಸೂರಿನ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ ಮೂಲಕ ಉಪಗ್ರಹ ಆಧಾರಿತ ತರಬೇತಿಯನ್ನು ಹಮ್ಮಿಕೊಳ್ಳಲಾಗುತ್ತಿದ್ದು, ಈ ತರಬೇತಿಯನ್ನು ತಾಲ್ಲೂಕು ಕೇಂದ್ರದಲ್ಲಿರುವ ಸಾಮರ್ಥ್ಯ ಸೌಧದಲ್ಲಿ ನೀಡಲಾಗುತ್ತಿದೆ. ಆದರೆ ತಾಲ್ಲೂಕು ಕೇಂದ್ರದಿಂದ ದೂರವಿರುವ ಗ್ರಾಮ ಪಂಚಾಯತಿಗಳ ಸದಸ್ಯರು ಹಲವಾರು ಕಾರಣಗಳಿಂದ ಸೂಕ್ತ ಸಮಯಕ್ಕೆ ತರಬೇತಿ ತಾಲ್ಲೂಕು ಪಂಚಾಯತ್ ಕೇಂದ್ರಗಳಲ್ಲಿರುವ ಸಾಮರ್ಥ್ಯಸೌಧದಲ್ಲಿ ಹಾಜರಾಗಲು ಸಾಧ್ಯವಾಗದೇ ಇರುವುದನ್ನು ಮನಗಂಡು ಗ್ರಾಮ ಪಂಚಾಯತಿ ಸದಸ್ಯರಿಗೆ ಹೆಚ್ಚಿನ ತಿಳುವಳಿಕೆ ಮೂಡಿಸುವ ಹಿನ್ನೆಲೆಯಲ್ಲಿ ಸ್ಥಳೀಯ ಗ್ರಾಮ ಪಂಚಾಯತಿ ಹಂತದಲ್ಲಿಯೇ ತರಬೇತಿ ನೀಡಲು ಉಪಗ್ರಹ ಸ್ವೀಕೃತಿ ಕೇಂದ್ರಗಳನ್ನು ಸ್ಥಾಪಿಸುವ ಬಗ್ಗೆ ಸರ್ಕಾರ ನಿರ್ಧರಿಸಿದೆ.

ಸದರಿ ಉಪಗ್ರಹ ಸ್ವೀಕೃತಿ ಕೇಂದ್ರ(ಸ್ಯಾಟ್‌ಕಾಂ) ಗಳನ್ನು ಸ್ಥಾಪಿಸುವ ಬಗ್ಗೆ ಮೇಲೆ ಓದಲಾದ (1)ರ ಪತ್ರದಲ್ಲಿ ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು ಇವರು ರೂ.15.06ಕೋಟಿಗಳ ಅನುದಾನಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ (2)ರ ಅನಧಿಕೃತ ಟಿಪ್ಪಣಿಯಲ್ಲಿ ಆರ್ಥಿಕ ಇಲಾಖೆಯು 2018-19ನೇ ಸಾಲಿನ ಗ್ರಾಮೀಣ ಅಭಿವೃದ್ಧಿ ಪಂಚಾಯತ್ ರಾಜ್ ಗಣಕೀಕರಣದ ಲೆಕ್ಕ ಶೀರ್ಷಿಕೆ:2515-00-101-0-24-059ರಡಿ ಒದಗಿಸಿರುವ ರೂ.21.23ಕೋಟಿಗಳಲ್ಲಿ ರೂ.7.00ಕೋಟಿಗಳನ್ನು ಗ್ರಾಮ ಪಂಚಾಯತಿಗಳಲ್ಲಿ ಉಪಗ್ರಹ ಸ್ವೀಕೃತಿ ಕೇಂದ್ರಗಳನ್ನು ಸ್ಥಾಪಿಸಲು ರೂ.7.00ಕೋಟಿಗಳನ್ನು ಹಂಚಿಕೆ ಮಾಡಲಾಗಿರುತ್ತದೆ.

ಸದರಿ ಪ್ರಸ್ತಾವನೆಯನ್ನು ಪರಿಶೀಲಿಸಿದ್ದು, 2018-19ನೇ ಸಾಲಿಗೆ ಗ್ರಾಮ ಪಂಚಾಯತಿ ಮಟ್ಟದಲ್ಲಿ ಉಪಗ್ರಹ ಸ್ವೀಕೃತಿ ಕೇಂದ್ರ(ಸ್ಯಾಟ್‌ಕಾಂ)ಗಳನ್ನು ಸ್ಥಾಪಿಸಲು ಉದ್ದೇಶಿಸಿದ್ದು, ಸದರಿ ಉದ್ದೇಶಕ್ಕಾಗಿ ಲೆಕ್ಕ ಶೀರ್ಷಿಕೆ:2515-00-101-0-24-059 ರಡಿ ಒದಗಿಸಿರುವ ರೂ.21.23ಕೋಟಿಗಳಲ್ಲಿ ರೂ.7.00ಕೋಟಿಗಳನ್ನು ಮೇಲೆ ಓದಲಾದ (3) ರಲ್ಲಿನ ಸಭೆಯ ನಡವಳಿಯಲ್ಲಿ ಬಿಡುಗಡೆಗೊಳಿಸಲು ನಿರ್ದೇಶಿಸಿದೆ. ಆದುದರಿಂದ ಈ ಕೆಳಗಿನಂತೆ ಆದೇಶಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ 145 ಜಿಪಸ 2018, ಬೆಂಗಳೂರು, ದಿನಾಂಕ:13-08-2018.**

ಪ್ರಸ್ತಾವನೆಯಲ್ಲಿ ವಿವರಿಸಿದ ಅಂಶಗಳ ಹಿನ್ನೆಲೆಯಲ್ಲಿ ರಾಜ್ಯದಲ್ಲಿನ ಎಲ್ಲಾ ಗ್ರಾಮ ಪಂಚಾಯತಿಗಳ ಮಟ್ಟದಲ್ಲಿ ಸ್ಯಾಟ್‌ಕಾಂ ಕೇಂದ್ರಗಳನ್ನು ಸ್ಥಾಪಿಸಲು ಲೆಕ್ಕ ಶೀರ್ಷಿಕೆ:2515-00-101-0-24-059 ರಡಿ ರೂ.7.00ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದೆ.

ಎಲ್ಲಾ ಗ್ರಾಮ ಪಂಚಾಯತಿಗಳ ಮಟ್ಟದಲ್ಲಿ ಉಪಗ್ರಹ ಸ್ವೀಕೃತಿ ಕೇಂದ್ರ(ಸ್ಯಾಟ್‌ಕಾಂ)ಗಳನ್ನು ಸ್ಥಾಪಿಸಲು ಹಾಗೂ ಸದರಿ ಕೇಂದ್ರಗಳ ನಿರ್ವಹಣೆಯ ಜವಾಬ್ದಾರಿಯನ್ನು ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು ರವರಿಗೆ ವಹಿಸಲಾಗಿದ್ದು, ಅದರಂತೆ 2018-19ನೇ ಸಾಲಿಗೆ ಲೆಕ್ಕ ಶೀರ್ಷಿಕೆ:2515-00-101-0-24-059 ರಡಿ ಒದಗಿಸಿರುವ ಅನುದಾನದಲ್ಲಿ ರೂ.7.00ಕೋಟಿಗಳ ಅನುದಾನವನ್ನು ಸದರಿ ಸಂಸ್ಥೆಗೆ ನಿರ್ದೇಶಕರು, ಇ-ಆಡಳಿತ ರವರು ಅನುದಾನವನ್ನು ನಿಯಮಾನುಸಾರ ಬಿಡುಗಡೆಗೊಳಿಸಲು ಆದೇಶಿಸಿದೆ.

ಸದರಿ ಯೋಜನೆಯನ್ನು ಅನುಷ್ಠಾನಗೊಳಿಸುವ ಪೂರ್ವದಲ್ಲಿಯೇ ಕೆ.ಟಿ.ಪಿ.ಪಿ ನಿಯಮಗಳನ್ನು ಪಾಲಿಸುವ ಷರತ್ತಿಗೊಳಪಟ್ಟು ಅಗತ್ಯ ಕ್ರಮವಹಿಸಲು ತಿಳಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 239 ವೆಚ್ಚ-6/2018, ದಿನಾಂಕ:19-07-2018ರ ಸಹಮತಿಯ ಮೇರೆಗೆ ಹಾಗೂ ಆರ್ಥಿಕ ಇಲಾಖೆಯ ಅದೇಶ ಸಂಖ್ಯೆ:ಎಫ್‌ಡಿ 04 ಟಿಎಫ್‌ಪಿ 2018, ದಿನಾಂಕ: 24-07-2018ರಲ್ಲಿ ನೀಡಿರುವ ಆರ್ಥಿಕ ಅಧಿಕಾರ ಪ್ರತ್ಯಾಯೋಜನೆಯ ಅನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾರ ಆದೇಶನುಸಾರ
ಮತ್ತು ಅವರ ಹೆಸರಿನಲ್ಲಿ

(ವಿ.ವೆಂಕಟೇಶ್)
ಸರ್ಕಾರದ ಅಧೀನ ಕಾರ್ಯದರ್ಶಿ(ಜಿ.ಪಂ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.
13.8.18

ಇವರಿಗೆ:

1. ಮಹಾಲೇಖಪಾಲರು (ಲೆಕ್ಕ ಮತ್ತು ಪರಿಶೋಧನೆ), ಕರ್ನಾಟಕ, ಬೆಂಗಳೂರು.
2. ನಿರ್ದೇಶಕರು, ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಂಸ್ಥೆ, ಮೈಸೂರು.
3. ನಿರ್ದೇಶಕರು, ರಾಜ್ಯ ಹುಜೂರು ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
4. ನಿರ್ದೇಶಕರು, ಇ-ಆಡಳಿತ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
5. ಉಪ ನಿರ್ದೇಶಕರು, ಜಿಲ್ಲಾ ಖಜಾನೆ, ಮೈಸೂರು ಜಿಲ್ಲೆ, ಮೈಸೂರು.
6. ಪ್ರಧಾನ ಸಂಪಾದಕರು, ಕರ್ನಾಟಕ ವಿಕಾಸ, ಬಹುಮಹಡಿ ಕಟ್ಟಡ, ಬೆಂಗಳೂರು.
7. ಸಂಪಾದಕರು, ಕರ್ನಾಟಕ ವಿಕಾಸ, ಬಹುಮಹಡಿ ಕಟ್ಟಡ, ಬೆಂಗಳೂರು.
8. ಶಾಖಾ ರಕ್ಷಾ ಕಡತಕ್ಕೆ / ಹೆಚ್ಚುವರಿ ಪ್ರತಿ.

ಪ್ರತಿಯನ್ನು:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ(ಪಂ.ರಾಜ್), ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
3. ಸರ್ಕಾರದ ಕಾರ್ಯದರ್ಶಿ(ಪಂ.ರಾಜ್), ಗ್ರಾ.ಅ.ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ.